ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: **DTE-ADMI0JSP/4/2022**

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು- 560001.
ದಿನಾಂಕ: 21-03-2022.

## ಸುತ್ತೋಲೆ

ವಿಷಯ: ಏಕೀಕೃತ ಸಾರ್ವಜನಿಕ ದೂರು ನಿವಾರಣಾ ವ್ಯವಸ್ಥೆ / ತಂತ್ರಾಂಶ (Integrated Public Grievance Redressal System)ಕ್ಕೆ ಸಂಬಂಧಿಸಿದಂತೆ ಪ್ರತಿ ಕಛೇರಿಯಲ್ಲಿ **ಸಾರ್ವಜನಿಕ ಕುಂದುಕೊರತೆ ನಿರ್ವಹಣಾಧಿಕಾರಿ (Public Grievance Management Officer-PGMO)**ಯನ್ನು ನೇಮಿಸುವ ಕುರಿತು.

ಉಲ್ಲೇಖ: ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬೆಂಗಳೂರು ಇವರ ಪತ್ರ ಸಂಖ್ಯೆ: ಸಿಆಸುಇ 29 ಪಿಆರ್‌ಜೆ 2020, ಬೆಂಗಳೂರು, ದಿನಾಂಕ: 09-08-2021.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಸರ್ಕಾರವು ಏಕೀಕೃತ ಸಾರ್ವಜನಿಕ ದೂರು ನಿವಾರಣಾ ತಂತ್ರಾಂಶ (Integrated Public Grievance Redressal System) ಅನುಷ್ಠಾನದ ಮಾರ್ಗಸೂಚಿಗಳನ್ನು ಬಿಡುಗಡೆಗೊಳಿಸಿದೆ. ಈ ಮಾರ್ಗಸೂಚಿಯಲ್ಲಿ IPGRSಗೆ ಸಂಬಂಧಿಸಿದಂತೆ **ಪ್ರತಿ ಕಛೇರಿಯಲ್ಲಿ ಸಾರ್ವಜನಿಕ ಕುಂದುಕೊರತೆ ನಿರ್ವಹಣಾಧಿಕಾರಿ (Public Grievance Management Officer-PGMO)**ಯನ್ನು ನೇಮಿಸುವಂತೆ ತಿಳಿಸಲಾಗಿರುತ್ತದೆ.

ಅದರಂತೆ, ಆಯುಕ್ತರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ **ಸಾರ್ವಜನಿಕ ಕುಂದುಕೊರತೆ ನಿರ್ವಹಣಾಧಿಕಾರಿ (Public Grievance Management Officer-PGMO)**ಯಾಗಿ **ಜಂಟಿ ನಿರ್ದೇಶಕರು (ತನಿಖೆ)** ಇವರನ್ನು ನೇಮಿಸಲಾಗಿದೆ.

ಸರ್ಕಾರಿ / ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳು, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ **ಪ್ರಾಂಶುಪಾಲರುಗಳು** IPGRSನಲ್ಲಿ ಈಗಾಗಲೇ L1 ಅಧಿಕಾರಿಗಳಾಗಿ (Level-1) ಕಾರ್ಯನಿರ್ವಹಿಸುತ್ತಿರುವುದರಿಂದ ಆಯಾ ಸಂಸ್ಥೆಗಳಲ್ಲಿ **ಸಾರ್ವಜನಿಕ ಕುಂದುಕೊರತೆ ನಿರ್ವಹಣಾಧಿಕಾರಿ (Public Grievance Management Officer-PGMO)**ಯಾಗಿ **ಪ್ರಾಂಶುಪಾಲರು**ಗಳನ್ನು ನೇಮಿಸಲಾಗಿದೆ.

ಟಿಪ್ಪಣಿಯು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ

ಜಂಟಿ ನಿರ್ದೇಶಕರು (ಆಡಳಿತ)
21/3/2022

ಇವರಿಗೆ: ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ,

1. ಶ್ರೀ ಶೇಖರ್, ಜಂಟಿ ನಿರ್ದೇಶಕರು (ತನಿಖೆ), ಆಯುಕ್ತರ ಕಛೇರಿ, ತಾ.ಶಿ.ಇ, ಬೆಂಗಳೂರು.
2. ಪ್ರಾಂಶುಪಾಲರುಗಳು, ಎಲ್ಲಾ ಸರ್ಕಾರಿ / ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳು, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು (L1 ಅಧಿಕಾರಿಗಳು).
3. ಆಯುಕ್ತರ ಆಪ್ತಶಾಖೆಗೆ.
4. ನಿರ್ದೇಶಕರ ಆಪ್ತಶಾಖೆಗೆ.
5. ಇ-ಆಡಳಿತ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು.